ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ	:	62 (102)
ಸದಸ್ಯರ ಹೆಸರು	:	ಶ್ರೀ ನಸೀರ್ ಅಹ್ಮದ್(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	13/12/2021
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಪ್ರಶ್ನೆ	ಉತ್ತರ
ಅ) ಹೊಸದಾಗಿ ವಿಜಯನಗರ ಜಿಲ್ಲೆಯಾಗಿ 3 ತಿಂಗಳಾದರು ಜಿಲ್ಲಾ ಮಟ್ಟದ ಕಛೇರಿಗಳು ಪ್ರಾರಂಭವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಆ) ಹೊಸದಾಗಿ ವಿಜಯನಗರ ಜಿಲ್ಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಕಛೇರಿಗಳನ್ನು ಯಾವಾಗ ಪ್ರಾರಂಭ ಮಾಡಲಾಗುವುದು; ಪ್ರಾರಂಭ ಮಾಡಲು ಎಷ್ಟು ದಿನಗಳ ಕಾಲವಕಾಶ ಬೇಕಾಗುತ್ತದೆ;	ವಿಜಯನಗರ ಜಿಲ್ಲೆಯಲ್ಲಿ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಕಛೇರಿಗಳನ್ನು ಸ್ಥಾಪಿಸಲು ಮತ್ತು ಈ ಕಛೇರಿಗೆ ಹುದ್ದೆಗಳನ್ನು ಮಂಜೂರು ಮಾಡಲು ಸಹಮತಿ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಸಹಮತಿ ದೊರೆತ ನಂತರ ಈ ಬಗ್ಗೆ ಕ್ರಮವಹಿಸಲಾಗುವುದು.
ಇ) ವಿಜಯನಗರ ಜಿಲ್ಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಕಛೇರಿಗಳಿಗೆ ಹುದ್ದೆಗಳನ್ನು ಯಾವಾಗ ಮಂಜೂರು ಮಾಡಲಾಗುವುದು; ಮಂಜೂರು ಮಾಡಲು ಎಷ್ಟು ದಿನಗಳು ಕಾಲವಕಾಶ ಬೇಕಾಗುತ್ತದೆ? (ಮಾಹಿತಿ ನೀಡುವುದು).	

ಸಂಖ್ಯೆ:ಇಪಿ 107 ಡಿಎಆರ್ 2021

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು